# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

***ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಹಚ್ಚಿನ್ಸ್ ರಸ್ತೆಯಲ್ಲಿ ಉದ್ಯಾನವನದಲ್ಲಿ ದಿನಾಂಕ: 20-10-2020 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.***

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ, ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ.ಶ್ರೀಕಾಂತ್, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ರಿವೋಬ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ)
4. ಶಾಂತಕುಮಾರ್ ಲೇಔಟ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ)
5. ಶ್ರೀಮತಿ ಇಂದಿರಾ ಅರುಣ್, ಸ್ಥಳೀಯರು,
6. ಶ್ರೀಮತಿ ರೋಜಿತಾ, ಸ್ಥಳೀಯರು,
7. ಶ್ರೀ ಎ.ಆರ್.ಸುರೇಶ್, ಸ್ಥಳೀಯರು,
8. ಶ್ರೀ ಬಿಜು ಚನಾಯತ್, ಸ್ಥಳೀಯರು,
9. ಶ್ರೀ ಮಣಿಶಂಕರ್, ಸದಸ್ಯರು ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು,
10. ಶ್ರೀ ತಿಪ್ಪೇಸ್ವಾಮಿ, ಸದಸ್ಯರು ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು,

**ಹಾಜರಿದ್ದ ಅಧಿಕಾರಿಗಳು**

1. ಶ್ರೀಮತಿ ಡಾ|| ವಿನುತಾ, ವೈದ್ಯಾಧಿಕಾರಿಗಳು,
2. ಶ್ರೀ ಎನ್ ಮಹೇಂದ್ರ ಪ್ರಸಾದ್, ಸಹ ಕಂದಾಯ ಅಧಿಕಾರಿ, ಮಾರುತಿಸೇವಾನಗರ ಉಪ ವಿಭಾಗ
3. ಶ್ರೀ ಮಹೇಶ್‌ಕುಮಾರ್, ಕರ ವಸೂಲಿಗಾರ, ಮಾರುತಿಸೇವಾನಗರ
4. ಶ್ರೀ ನವೀನ್, ಸಹಾಯಕ ಇಂಜಿನಿಯರ್ (ಬೆಸ್ಕಾಂ ಇಲಾಖೆ)
5. ಶ್ರೀ ಹನುಮಂತ, ಸಹಾಯಕ ಇಂಜಿನಿಯರ್ (ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ)
6. ಶ್ರೀ ಬಿ ರಾಜು, ಎ.ಎಸ್.ಐ, ಪುಲಿಕೇಶಿನಗರ, (ಪೊಲೀಸ್ ಇಲಾಖೆ)
7. ಶ್ರೀ ಎಸ್.ಎಂ. ಮಾಲಿ, ಪೊಲೀಸ್ ಕಾನ್ಸ್‌ಟೆಬಲ್

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ರಿವೋಬ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ) ವಾರ್ಡ್ ಕಮಿಟಿ ಸದಸ್ಯರು ಮಾತನಾಡಿ,** ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಗಳಿಂದ ಕಸ ಸಂಗ್ರಹಣೆ ಮತ್ತು ಸ್ವಚ್ಛಗೊಳಿಸುವ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರು ಸರಿಯಾಗಿ ಕೆಲಸ ನಿರ್ವಹಿಸದೇ ಇರುವ ಬಗ್ಗೆ ಹಾಗೂ ವಾರ್ಡಿನಲ್ಲಿ ಮನೆ ಮನೆಗಳಿಂದ ಕಸವನ್ನು ಬೇರ್ಪಡಿದೇ ಮಿಶ್ರ ಕಸವನ್ನು ಸಂಗ್ರಹಿಸುತ್ತಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಹಾಗೂ ನೊಡೆಲ್ ಅಧಿಕಾರಿಗಳು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಪಾಲಿಕೆ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು ಸರಿಯಾಗಿ ಕೆಲಸಕ್ಕೆ ಹಾಜರಾಗದೇ ಇರುವ ಪೌರಕಾರ್ಮಿಕರಿಗೆ ನೋಟೀಸ್ ಜಾರಿ ಮಾಡಲು ಹಾಗೂ ವಾರ್ಡಿನಲ್ಲಿ ಮನೆ ಮನೆಗಳಿಂದ ಹಸಿ ಕಸ ಹಾಗೂ ಒಣ ಕಸವನ್ನಾಗಿ

ಬೇರ್ಪಡಿಸಿ, ಕಸವನ್ನು ಸಂಗ್ರಹಿಸಲು ಕ್ರಮ ವಹಿಸಲು ಸಭೆಯಲ್ಲಿ ಹಾಜರಿದ್ದ, ಹಿರಿಯ ಆರೋಗ್ಯ ನಿರೀಕ್ಷಕರಿಗೆ ಸೂಚಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಸುಮಾರು 7 ರಿಂದ 8 ಟನ್ ಘನತ್ಯಾಜ್ಯ ಉತ್ಪತ್ತಿಯಾಗುತ್ತಿರುವುದಾಗಿ ಸಭೆಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಒಣತ್ಯಾಜ್ಯವನ್ನು ಸಂಗ್ರಹಣೆ, ಸಂಸ್ಕರಣೆ ಮತ್ತು ವಿಲೇವಾರಿ ಕಾರ್ಯವನ್ನು ನಿರ್ವಹಿಸಲು ಒಣತ್ಯಾಜ್ಯ ಘಟಕವನ್ನು ತೆರೆಯಲು ಸಭೆಯಲ್ಲಿ ಪ್ರಸ್ತಾಪಿಸಿದರು.

2) **ಸ್ಥಳೀಯರು ಮಾತನಾಡಿ,** ವಾರ್ಡ್ ವ್ಯಾಪ್ತಿಯ ಪಾಟರಿ ರಸ್ತೆ, ಬಾಣಸವಾಡಿ ಮುಖ್ಯರಸ್ತೆ, ಜೀವನಹಳ್ಳಿ ಜಂಕ್ಷನ್‌ನಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮ ವತಿಯಿಂದ ಪೈಪ್‌ಲೈನ್ ಅಳವಡಿಸಲು ರಸ್ತೆಗಳನ್ನು ಅಗೆದು ಹಾಳು ಮಾಡಿದ್ದು, ಅಗೆದ ರಸ್ತೆಗಳನ್ನು ಕೂಡಲೇ ದುರಸ್ತಿಗೊಳಿಸಲು ಸಭೆಗೆ ತಿಳಿಸಿದರು.

3) **ಮಾನ್ಯ ಅಧ್ಯಕ್ಷರು ಹಾಗೂ ನೊಡೆಲ್ ಅಧಿಕಾರಿಗಳು ಮಾತನಾಡಿ,** ವಾರ್ಡ್ ವ್ಯಾಪ್ತಿಯ ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಕೊರೊನಾ ಸೋಂಕಿನ ಬಗ್ಗೆ ಜನಜಾಗೃತಿ ಮೂಡಿಸುವ ಕಾರ್ಯವನ್ನು ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಮಾರ್ಷಲ್‌ಗಳಿಗೆ ತಿಳಿಸಿದರು.

4) **ಮಾನ್ಯ ಅಧ್ಯಕ್ಷರು ಹಾಗೂ ನೊಡೆಲ್ ಅಧಿಕಾರಿಗಳು ಮಾತನಾಡಿ,** ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳು ಸರಿಯಾಗಿ ಉರಿಯುತ್ತಿರುವುದಿಲ್ಲ ಎಂದು ಸಭಾ ಗಮನಕ್ಕೆ ಬಂದಿದ್ದು, ಈ ಬಗ್ಗೆ ಬೀದಿ ದೀಪಗಳ ನಿರ್ವಹಣೆ ರವರು ಕೂಡಲೇ ಕ್ರಮ ವಹಿಸಿ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಸಭೆಗೆ ತಿಳಿಸಿದರು.

5) **ಸ್ಥಳೀಯರು ಮಾತನಾಡಿ,** ವಾರ್ಡ್ ವ್ಯಾಪ್ತಿಯ ಮಚಲಿಬೆಟ್ಟ ಜಂಕ್ಷನ್‌ನಲ್ಲಿ ಪುಂಡ ಪೋಕಿರಿಗಳು ಗಾಂಜಾ ಸೇವನೆ ಮಾಡಿ, ಸಾರ್ವಜನಿಕರಿಗೆ ತೊಂದರೆ ಮಾಡುತ್ತಿರುತ್ತಾರೆ ಎಂದು ಈ ಬಗ್ಗೆ ಸೂಕ್ತ ಕ್ರಮ ವಹಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಮಚಲಿಬೆಟ್ಟ ಜಂಕ್ಷನ್ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ರಾತ್ರಿ ಸಮಯದಲ್ಲಿ ಪೊಲೀಸ್ ಗಸ್ತನ್ನು ಹೆಚ್ಚಿಸಿ, ಗಾಂಜಾ ಸೇವನೆ ಮಾಡಿ, ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವ ಪುಂಡ ಪೋಕಿರಿಗಳ ವಿರುದ್ದ ಸೂಕ್ತ ಕ್ರಮ ವಹಿಸಲು ಸಭೆಗೆ ತಿಳಿಸಿದರು.

6) **ಸ್ಥಳೀಯರು ಮಾತನಾಡಿ,** ವಾರ್ಡ್ ವ್ಯಾಪ್ತಿಯ ಹಚ್ಚಿನ್ಸ್ ರಸ್ತೆ ಮತ್ತು ವೀಲರ್ ರಸ್ತೆಯ ಪಾದಾಚಾರಿ ರಸ್ತೆಯನ್ನು ಒತ್ತುವರಿ ಮಾಡಿಕೊಂಡು ವಾಣಿಜ್ಯ ಚಟುವಟಿಕೆ ನಡೆಸುತ್ತಿರುವುದರಿಂದ, ಪಾದಾಚಾರಿಗಳಿಗೆ ತುಂಬಾ ತೊಂದರೆಯುಂಟಾಗುತ್ತಿರುವುದಾಗಿ ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಹಾಗೂ ನೊಡೆಲ್ ಅಧಿಕಾರಿಗಳು ಮಾತನಾಡಿ, ಸದರಿ ಪ್ರದೇಶದಲ್ಲಿ ಪಾದಾಚಾರಿ ರಸ್ತೆ ಒತ್ತುವರಿ ತೆರವುಗೊಳಿಸಲು ಕ್ರಮ ವಹಿಸಲು ಸಭೆಯಲ್ಲಿ ಹಾಜರಿದ್ದ, ಕಾಮಗಾರಿ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

7) **ಸ್ಥಳೀಯರು ಮಾತನಾಡಿ,** ವಾರ್ಡ್ ವ್ಯಾಪ್ತಿಯ ವೀಲರ್ ರಸ್ತೆಯಲ್ಲಿ ಪಾಲಿಕೆ ವತಿಯಿಂದ ಪೂರ್ವಾನುಮತಿ ಪಡೆಯದೇ ಅನಧಿಕೃತವಾಗಿ ಕಟ್ಟಡ ನಿರ್ಮಾಣ ಮಾಡುತ್ತಿದ್ದು, ಅಂತಹ ಕಟ್ಟಡದ ಮಾಲೀಕರ ವಿರುದ್ಧ ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಹಾಗೂ ನೊಡೆಲ್ ಅಧಿಕಾರಿಗಳು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಕಟ್ಟಡ ನಿರ್ಮಾಣ ಮಾಡುತ್ತಿರುವ ಮಾಲೀಕರಿಗೆ ನೋಟಿಸ್ ಜಾರಿ ಮಾಡಿ, ಕೆ.ಎಂ.ಸಿ ಕಾಯ್ದೆಯಂತೆ ಕ್ರಮ ವಹಿಸಲು ಸಹಾಯಕ ಇಂಜಿನಿಯರ್ ರವರಿಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಮುಂದಿನ ವಾರ್ಡ್ ಸಮಿತಿ ಸಭೆಗೆ ಬೀದಿ ದೀಪಗಳ ನಿರ್ವಹಣೆ ರವರು ಕಡ್ಡಾಯವಾಗಿ ಹಾಜರಿರಲು ಕ್ರಮವಹಿಸಲು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

<u>ಪ್ರತಿಯನ್ನು</u>

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ.
6) ಕಛೇರಿ ಕಡತಕ್ಕೆ.